**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 647/2014**

ಪಿ.ಡಬ್ಲ್ಯೂ: 6

ಸಿ.ಡಬ್ಲ್ಯೂ:8

ಸಾಕ್ಷಿದಾರರ ಹೆಸರು : ಬಿ ಎನ್ ಅನಿಲ್ ಕುಮಾರ್
ತಂದೆಯ ಹೆಸರು: : ನಾರಾಯಣಗೌಡ
ವಯಸ್ಸು : **51 ವರ್ಷ**
ಉದ್ಯೋಗ : ವ್ಯವಸಾಯ
ವಾಸಸ್ಥಳ : ಬಾವಿಕೆರೆ ಗ್ರಾಮ

**ದಿನಾಂಕ: 23-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿ: 18-12-2013 ರಂದು ಸಂಜೆ 5-30 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಬಾವಿಕೆರೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಆನಂದ್ ರವರು ಹಣ ದುರುಪಯೋಗಪಡಿಸಿಕೊಂಡಿದ್ದ ವಿಚಾರವಾಗಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಸಭಾ ನಡವಳಿಕೆ, ರೆಜುಲುಷನ್ ಬುಕ್ ಹಾಗೂ ಕ್ಯಾಶ್ ಬುಕ್ ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ದಿ: 25-12-2013 ರಂದು ಬಾವಿಕೆರೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸಂಜೆ 5-30 ಗಂಟೆ ಸಮಯದಲ್ಲಿ ಆನಂದ್ ರವರು 100 ರೂ ಹಣದ ಛಾಪಾ ಕಾಗದದ ಮೇಲೆ ಹಣವನ್ನು ಹಿಂತಿರುಗಿಸುತ್ತೇನೆಂದು ಬರೆದುಕೊಟ್ಟ ಪತ್ರವನ್ನು ಅಮಾನತ್ತುಪಡಿಸಿಕೊಂಡ ವಿಚಾರವಾಗಿ ಪೊಲೀಸರು ಮತ್ತೊಂದು ಮಹಜರ್ ನ್ನು ಜರುಗಿಸಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಹೆಚ್) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆಮಾಲುಗಳನ್ನು ನೋಡಿ ಗುರುತಿಸಿರುತ್ತಾರೆ

**<u>ಪಾಟೀ ಸವಾಲು : ಆರೋಪಿ ಪರ</u>** <u>ಶ್ರೀ ಟಿ ಆರ್ ಎಸ್</u> **<u>ವಕೀಲರಿಂದ.</u>**

ಪೊಲೀಸರು ನನಗೆ ನೋಟೀಸನ್ನು ಮಹಜರ್ ಮಾಡಿದ ಒಂದು ದಿನದ ಮುಂಚೆ ನೀಡಿರುತ್ತಾರೆ. ಸಂಘಕ್ಕೂ ನಮ್ಮ ಮನೆಗೂ 100 ಮೀಟರ್ ದೂರ ಇರುತ್ತದೆ. ಹಣ ದುರುಪಯೋಗ ಆಗಿರುವ ಬಗ್ಗೆ ಪೊಲೀಸರು ಸಹಿ ಮಾಡಲು ಕೋರಿದ ಮೇರೆಗೆ ಸಹಿ ಮಾಡಿರುತ್ತೇನೆ. ಮಹಜರ್ ನ್ನು ಯಾರೂ ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಸಂಘದ ಪುಸ್ತಕಗಳು ಛಾಪ ಕಾಗದಗಳನ್ನು ಆನಂದ್ ರವರಿಗೆ ಅಮಾನತ್ತುಪಡಿಸಿಕೊಂಡಿರುತ್ತಾರೆ. ಪೊಲೀಸರಿ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತಿರಾ ನಿಮಗೆ ಯಾವುದೇ ವಿಚಾರ ತಿಳಿದಿರುವುದಿಲ್ಲ ಎಂದರೆ ಸರಿಯಲ್ಲ.

**<u>ಮರುವಿಚಾರಣೆ:</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**